**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಡಾ|| ವೈ.ಎ. ನಾರಾಯಣಸ್ವಾಮಿ ಇವರು ಮಂಡಿಸಿರುವ ನಿಯಮ-72ಕ್ಕೆ ಉತ್ತರ**

**ವಿಷಯ:**

**ರಾಜ್ಯದ ಅನುದಾನಿತ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಬೋಧಕರ ಹುದ್ದೆಗಳನ್ನು ಕಾಲಕಾಲಕ್ಕೆ ಭರ್ತಿ ಮಾಡದೇ ಇರುವುದರಿಂದ. ಹಾಲಿ ಶಾಲೆಗಳಲ್ಲಿ ಶೇ.50 ಕ್ಕಿಂತ ಹೆಚ್ಚಿನ ಹುದ್ದೆಗಳು ಖಾಲಿ ಇದ್ದು, ಗುಣಾತ್ಮಾಕ ಶಿಕ್ಷಣಕ್ಕೆ ತೊಂದರೆಯಾಗುತ್ತಿರುವ ವಿಚಾರವನ್ನು ಪ್ರಸ್ತಾಪಿಸಲಾಗಿದೆ.**

**ಉತ್ತರ:**

ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ಡಿಸೆಂಬರ್ 2015 ರವರೆಗೆ ಖಾಲಿ ಆಗಿರುವ ಬೋಧಕ ಹುದ್ದೆಗಳನ್ನು ಭರ್ತಿಸಲು ಅನುಮತಿ ನೀಡಲಾಗಿದೆ. ಅದರಂತೆ ದಿನಾಂಕ:31-12-2015 ರ ಪೂರ್ವದಲ್ಲಿ ಖಾಲಿಯಾದ ಎಲ್ಲಾ ಅರ್ಹ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ಕೋರಿ ಆಡಳಿತ ಮಂಡಳಿಗಳಿಂದ ಸ್ವೀಕೃತವಾದ ಪ್ರಸ್ತಾವನೆಗಳಿಗೆ ನಿಯಮಾನುಸಾರ ಪರಿಶೀಲಿಸಿ ಅನುದಾನಸಹಿತವಾಗಿ ಅನುಮೋದಿಸಲಾಗುತ್ತಿದೆ.

ಜಿಲ್ಲೆಗಳಲ್ಲಿ ಕಾರ್ಯಭಾರ ಕಡಿಮೆ ಇರುವ ಅನುದಾನಿತ ಶಾಲೆಗಳ ಶಿಕ್ಷಕರನ್ನು ಅಗತ್ಯವಿರುವ ಶಾಲೆಗಳಿಗೆ ಮರು ನಿಯೋಜನೆಗೊಳಿಸಲು ಜಿಲ್ಲಾ ಉಪನಿರ್ದೇಶಕರ ಹಂತದಲ್ಲಿ ಕ್ರಮವಹಿಸಲಾಗುತ್ತಿದೆ.

ದಿನಾಂಕ:01.01.2016ರ ನಂತರ ಖಾಲಿಯಾಗಿರುವ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಆರ್ಥಿಕ ಇಲಾಖೆಯ ಸಹಮತಿಯನ್ನು ಕೋರಲಾಗಿತ್ತು. ಆದರೆ, ಆರ್ಥಿಕ ಇಲಾಖೆಯು ದಿನಾಂಕ:28.11.2022ರಂದು ನೀಡಿರುವ ಅಭಿಪ್ರಾಯದಲ್ಲಿ ದಿನಾಂಕ:31.12.2015ರ ಅಂತ್ಯಕ್ಕೆ ಖಾಲಿಯಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಆದ್ಯತೆ ನೀಡುವಂತೆ ತಿಳಿಸಿರುತ್ತದೆ. ಆದ್ದರಿಂದ ದಿನಾಂಕ:31.12.2015ರ ಪೂರ್ವದಲ್ಲಿ ಖಾಲಿಯಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಿದ ನಂತರ ದಿನಾಂಕ:01.01.2016ರ ನಂತರ ಖಾಲಿಯಾಗಿರುವ ಹುದ್ದೆಗಳನ್ನು ಭರ್ತಿ ಮಾಡಲು ನಿಯಮಾನುಸಾರ ಪರಿಶೀಲಿಸಲಾಗುವುದು.

**ಸಂಖ್ಯೆ: ಇಪಿ 283 ಎಸ್ಇಎಸ್ 2023**

**(ಎಸ್.ಮಧುಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ**
**ಇಲಾಖಾ ಸಚಿವರು**